ಭಾನುವಾರ,28.12.2025
ಬೆಂಗಳೂರು, ಬೆಲೆ: 5ರೂ,
2 ಪುಟಗಳು
ಸಂಪುಟ 01 - ಸಂಚಿಕೆ 114
Digital Varthe Kannada Daily
Volume 01 - Issue 114
Sunday 28.12.2025
Price: 5/- Rs
2 Pages Bangalore

PRGI/RNI: KNKAN/25/A1348

ಡಿಜಿಟಲ್ ವಾರ್ತೆ

ಕನ್ನಡ ದಿನಪತ್ರಿಕೆ
ಕನ್ನಡಿಗರ ಶಕ್ತಿ

DIGITAL VARTHE
digitalvarthe@gmail.com
www.digitalvarthe.com

ಹೊತ್ತಿ ಉರಿದ ಕಾರು: ಇಬ್ಬರು ಪ್ರಾಣಾಪಾಯದಿಂದ ಪಾರು

ಧಾರವಾಡ: ಕಳೆದ ಕೆಲ ದಿನಗಳಿಂದ ರಾಜ್ಯದ ವಿವಿಧ ಭಾಗಗಳಲ್ಲಿ ಬಸ್ ಬೆಂಕಿಗೀಡಾಗುವುದು, ಮನೆಗಳಲ್ಲಿ ಅಗ್ನಿ ಅವಘಡಗಳು, ಅನಿಲ ಸಿಲಿಂಡರ್ ಸ್ಫೋಟದಂತಹ ಸರಣಿ ಘಟನೆಗಳು ಜನರಲ್ಲಿ ಆತಂಕ ಮೂಡಿಸುತ್ತಿವೆ.

ಇದೀಗ ಧಾರವಾಡದಲ್ಲಿ ಮತ್ತೊಂದು ಭೀಕರ ಘಟನೆ ನಡೆದಿದೆ. ಚಲಿಸುತ್ತಿದ್ದ ಕಾರಿನಲ್ಲಿ ಏಕಾಏಕಿ ಬೆಂಕಿ ಕಾಣಿಸಿಕೊಂಡಿದ್ದು, ಕೆಲವೇ ನಿಮಿಷಗಳಲ್ಲಿ ಕಾರು ಸಂಪೂರ್ಣವಾಗಿ ಸುಟ್ಟು ಭಸ್ಮವಾಗಿರುವ ಘಟನೆ ನಡೆದಿದೆ. ಧಾರವಾಡ ನಗರದ ಕೋರ್ಟ್ ವೃತ್ತದಿಂದ ಕೆಸಿಡಿ ಕಾಲೇಜಿನ ದಿಕ್ಕಿಗೆ ಹೊರಟಿದ್ದ ಕಾರಿನ ಎಂಜಿನ್‌ನಿಂದ ಹೊಗೆ ಕಾಣಿಸಿಕೊಂಡಿತ್ತು. ನಂತರ ಏಕಾಏಕಿ ಶಾರ್ಟ್ ಸರ್ಕ್ಯೂಟ್‌ನಿಂದ ಬೆಂಕಿ ಹೊತ್ತಿಕೊಂಡಿದೆ. ಕಾರು ಅಳ್ನಾವರ ತಾಲೂಕಿನ ನಿಜಾಮುದ್ದೀನ ಎಂಬುವರಿಗೆ ಸೇರಿದೆ. ಕಾರಿನ ನೋಂದಣಿ ಸಂಖ್ಯೆ GA 06 D 3919 ಎಂದು ತಿಳಿದುಬಂದಿದೆ. ಬೆಂಕಿ ಕಾಣಿಸಿಕೊಂಡ ತಕ್ಷಣ ಚಾಲಕ ನಿಜಾಮುದ್ದೀನ ಎಚ್ಚರಿಕೆ ವಹಿಸಿ ತಕ್ಷಣ ಕಾರಿನಿಂದ ಹೊರಬಂದಿದ್ದಾರೆ.

ಇದರಿಂದ ದೊಡ್ಡ ಅನಾಹುತ ತಪ್ಪಿದಂತಾಗಿದೆ. ಕಾರಿನಲ್ಲಿ ಇತರ ಪ್ರಯಾಣಿಕರು ಇರದ ಕಾರಣ ಯಾವುದೇ ಪ್ರಾಣಹಾನಿ ಸಂಭವಿಸಿಲ್ಲ. ನಡು ರಸ್ತೆಯಲ್ಲೇ ಕಾರು ಧಗಧಗನೆ ಹೊತ್ತಿ ಉರಿಯುತ್ತಿರುವ ದೃಶ್ಯವನ್ನು ಕಂಡ ಸಾರ್ವಜನಿಕರು ಭಯಭೀತರಾಗಿದ್ದರು. ಕೆಲವರು ತಕ್ಷಣ ಅಗ್ನಿಶಾಮಕ ದಳಕ್ಕೆ ಮಾಹಿತಿ ನೀಡಿದ್ದಾರೆ. ಸುದ್ದಿ ತಿಳಿಯುತ್ತಿದ್ದಂತೆ ಅಗ್ನಿಶಾಮಕ ಸಿಬ್ಬಂದಿ ಸ್ಥಳಕ್ಕೆ ಧಾವಿಸಿ, ತ್ವರಿತ ಕಾರ್ಯಾಚರಣೆ ನಡೆಸಿದರು. ಸಾಕಷ್ಟು ಪ್ರಯತ್ನದ ಬಳಿಕ ಬೆಂಕಿಯನ್ನು ನಂದಿಸಲಾಯಿತು.

ಪಾದಚಾರಿಗೆ ಸಿಮೆಂಟ್ ಮಿಕ್ಸರ್ ಲಾರಿ ಡಿಕ್ಕಿ ವ್ಯಕ್ತಿ ಮೃತ್ಯು

ಆನೇಕಲ್: ರಸ್ತೆಬದಿ ನಡೆದುಕೊಂಡು ಹೋಗ್ತಿದ್ದ ಪಾದಚಾರಿಗೆ ಸಿಮೆಂಟ್ ಮಿಕ್ಸರ್ ಲಾರಿ ಗುದ್ದಿದ ಪರಿಣಾಮ ವ್ಯಕ್ತಿ ಸ್ಥಳದಲ್ಲೇ ಸಾವನ್ನಪ್ಪಿರುವ ಘಟನೆ ಆನೇಕಲ್ ತಾಲೂಕಿನ ಸಿಂಗೇನ ಅಗ್ರಹಾರ ಗ್ರಾಮದಲ್ಲಿ ನಡೆದಿದೆ. ಸಿಂಗೇನ ಅಗ್ರಹಾರ ನಿವಾಸಿ ನಾರಾಯಣಸ್ವಾಮಿ ಮೃತ ದುರ್ದೈವಿ. ಶನಿವಾರ ಸುಮಾರಿಗೆ ಮೃತ ವ್ಯಕ್ತಿ ರಸ್ತೆ ಬದಿಯಲ್ಲಿ ನಡೆದುಕೊಂಡು ಹೋಗುತ್ತಿದ್ದರು. ಈ ವೇಳೆ ವೇಗವಾಗಿ ಬಂದ ಸಿಮೆಂಟ್ ಮಿಕ್ಸರ್ ಲಾರಿ ವ್ಯಕ್ತಿಗೆ ಗುದ್ದಿದೆ. ಪರಿಣಾಮ ವ್ಯಕ್ತಿ ಸ್ಥಳದಲ್ಲೇ ಸಾವನ್ನಪ್ಪಿದ್ದು, ಅಪಘಾತವಾದರೂ ಲಾರಿಯನ್ನು ನಿಲ್ಲಿಸದೇ ಚಾಲಕ ಹಾಗೆ ತೆರಳಿದ್ದಾನೆ. ಅಪಘಾತದ ದೃಶ್ಯ ಸ್ಥಳದಲ್ಲೇ ಇದ್ದ ಸಿಸಿಟಿವಿ ಕ್ಯಾಮರಾದಲ್ಲಿ ಸೆರೆಯಾಗಿದೆ.

ಸ್ಥಳಕ್ಕೆ ಪೊಲೀಸರು ಭೇಟಿ ನೀಡಿ, ಪರಿಶೀಲನೆ ನಡೆಸಿದ್ದು, ಈ ಸಂಬಂಧ ಅತ್ತಿಬೆಲೆ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಯುವತಿಗೆ 37 ಲಕ್ಷ ವಂಚನೆ, ಆರೋಪಿ ಅರೆಸ್ಟ್

ಬೆಂಗಳೂರು: ಮದುವೆಯಾಗುವುದಾಗಿ ನಂಬಿಸಿ ಯುವತಿಯನ್ನು ವಂಚಿಸಿದ ವ್ಯಕ್ತಿಯೊಬ್ಬ, ಆಕೆಯ ಅಪ್ರಾಪ್ತ ತಂಗಿಯ ಮೇಲೆ ಅತ್ಯಾಚಾರ ಎಸಗಿರುವ ಶಾಕಿಂಗ್ ಘಟನೆ ಬೆಂಗಳೂರಿನಲ್ಲಿ ನಡೆದಿದೆ. ಪ್ರಕರಣಕ್ಕೆ ಸಂಬಂಧಿಸಿದಂತೆ ಆರೋಪಿಯನ್ನು ಪೊಲೀಸರು ಬಂಧಿಸಿದ್ದಾರೆ.

ಬಂಧಿತ ಆರೋಪಿಯನ್ನು ಶುಭಾಂಶು ಶುಕ್ಲಾ (27) ಎಂದು ಗುರುತಿಸಲಾಗಿದೆ. ಆರೋಪಿ ಮೊದಲಿಗೆ ಸಂತ್ರಸ್ತ ಯುವತಿಯ ಅಪ್ರಾಪ್ತ ಸಹೋದರಿಯೊಂದಿಗೆ ಪರಿಚಯ ಬೆಳೆಸಿಕೊಂಡಿದ್ದ. ಆ ಪರಿಚಯದ ಮೂಲಕ ಕುಟುಂಬಕ್ಕೂ ಹತ್ತಿರವಾಗಿದ್ದ ಆತ, ವಿಶ್ವಾಸ ಗಳಿಸಿ ಮನೆಮಂದಿಯ ಒಪ್ಪಿಗೆ ಪಡೆದುಕೊಂಡಿದ್ದಾನೆ. ನಂತರ, "ಹಿರಿಯ ಸಹೋದರಿಗೆ ಮುಂಬೈನಲ್ಲಿ ಉದ್ಯೋಗ ಸಿಕ್ಕಿದೆ" ಎಂದು ಹೇಳಿ, ಸಂತ್ರಸ್ತ ಯುವತಿ ಹಾಗೂ ಆಕೆಯ ಕುಟುಂಬವನ್ನು ನಂಬಿಸಿ ಮುಂಬೈಗೆ ಕರೆದುಕೊಂಡು ಹೋಗಿದ್ದಾನೆ. ಮುಂಬೈನಲ್ಲಿ ಖಾಸಗಿ ಫ್ಲ್ಯಾಟ್‌ನಲ್ಲಿ ಇಬ್ಬರೂ ಲಿವಿನ್ ರಿಲೇಷನ್‌ಶಿಪ್‌ನಲ್ಲಿ ಇದ್ದರು.

ಕೆಲವೇ ದಿನಗಳಲ್ಲಿ, ಶುಭಾಂಶುಗೆ ಈಗಾಗಲೇ ಮದುವೆಯಾಗಿದೆ ಎಂಬ ಸತ್ಯ ಸಂತ್ರಸ್ತೆಗೆ ಗೊತ್ತಾಗಿದೆ. ಈ ವಿಚಾರವನ್ನು ಪ್ರಶ್ನಿಸಿದಾಗ, "ನಾನು ನನ್ನ ಪತ್ನಿಯಿಂದ ವಿಚ್ಛೇದನ ಪಡೆಯುತ್ತೇನೆ, ನಿನ್ನನ್ನೇ ಮದುವೆಯಾಗುತ್ತೇನೆ" ಎಂದು ಹೇಳಿ ನಂಬಿಸಿದ್ದಾನೆ. ಆರೋಪಿ ಪತ್ನಿಯೂ ಸಹ ಸಂತ್ರಸ್ತ ಯುವತಿಯೊಂದಿಗೆ ಮಾತನಾಡಿ, ತಾನು ಶುಭಾಂಶುಗೆ ಡಿವೋರ್ಸ್ ನೀಡುವುದಾಗಿ ಹೇಳಿದ್ದಾಳೆ. ಇದರಿಂದ ನಂಬಿಕೆ ಇಟ್ಟುಕೊಂಡ ಸಂತ್ರಸ್ತೆ ಸಂಬಂಧವನ್ನು ಮುಂದುವರಿಸಿದ್ದಳು.

ಬಳಿಕ ಶುಭಾಂಶು ಇದೇ ರೀತಿಯ ವಂಚನೆಯನ್ನು ಮತ್ತೊಬ್ಬ ಅಪ್ರಾಪ್ತ ಯುವತಿಯ ಮೇಲೂ ನಡೆಸುತ್ತಿರುವುದು ಬೆಳಕಿಗೆ ಬಂದಿದೆ. ಈ ವಿಚಾರ ಹೊರಬಿದ್ದ ನಂತರ ಆರೋಪಿ, ಸಂತ್ರಸ್ತೆಯ ಮೇಲೆ ಮಾನಸಿಕ ಹಾಗೂ ದೈಹಿಕ ಹಿಂಸೆ ನೀಡಲು ಆರಂಭಿಸಿದ್ದಾನೆ ಎಂದು ದೂರಲಾಗಿದೆ. ಆರೋಪಿ ಸಂತ್ರಸ್ತ ಯುವತಿಯ ಬಳಿ ಸುಮಾರು ₹37 ಲಕ್ಷ ನಗದು ಪಡೆದುಕೊಂಡಿದ್ದು, ಆಕೆಯ ಮನೆಯಿಂದ 559 ಗ್ರಾಂ ಚಿನ್ನಾಭರಣ ಕದ್ದಿರುವ ಆರೋಪವೂ ಇದೆ. ಈ ಬಗ್ಗೆ ದೂರು ನೀಡಿದರೆ ಕೊಲೆ ಮಾಡುವುದಾಗಿ ಬೆದರಿಕೆ ಹಾಕಿದ್ದಾನೆ ಎಂದು ಸಂತ್ರಸ್ತೆ ದೂರಿದ್ದಾಳೆ.

ನಿರಂತರ ಹಿಂಸೆ ಮತ್ತು ಬೆದರಿಕೆ ತಾಳಲಾರದೆ, ಸಂತ್ರಸ್ತೆ ಕೊನೆಗೆ ಆರೋಪಿಯನ್ನು ಬಿಟ್ಟು ಮನೆಗೆ ವಾಪಾಸ್ ಆಗಿದ್ದಾಳೆ.. ಸಂತ್ರಸ್ತೆಯ ಪರಿಚಯಕ್ಕೆ ಮೂಲ ಕಾರಣವಾಗಿದ್ದ ಆಕೆಯ ಅಪ್ರಾಪ್ತ ಸಹೋದರಿಯ ಮೇಲೂ ಆರೋಪಿ ಅತ್ಯಾಚಾರ ಎಸಗಿದ್ದಾನೆ ಎಂಬ ಆರೋಪ ಹೊರಬಿದ್ದಿದೆ.

ಅಪ್ರಾಪ್ತ ಬಾಲಕಿ ನೀಡಿದ ದೂರಿನಲ್ಲಿ, "ಗ್ರೂಪ್ ಸ್ಟಡಿ ನೆಪದಲ್ಲಿ ಪರಿಚಯ ಮಾಡಿಕೊಂಡ ಶುಭಾಂಶು, ಹಲವು ಬಾರಿ ನನ್ನ ಮೇಲೆ ಅತ್ಯಾಚಾರ ಎಸಗಿದ್ದಾನೆ. ನಾನು ಕರೆದಾಗೆಲ್ಲ ಬರಬೇಕು ಎಂದು ಬೆದರಿಸಿದ್ದ. ನನ್ನ ಮನೆಯವರನ್ನು ಪರಿಚಯ ಮಾಡಿಸು, ಹಾಗಾದರೆ ಮಾತ್ರ ನಿನ್ನನ್ನು ಬಿಡುತ್ತೇನೆ ಎಂದು ಹೆದರಿಸಿದ್ದ" ಎಂದು ಹೇಳಿದ್ದಾಳೆ. ಬಾಗಲಗುಂಟೆ ಪೊಲೀಸರು, ಆರೋಪಿಯನ್ನು ಬಂಧಿಸಿ ವಿಚಾರಣೆ ನಡೆಸುತ್ತಿದ್ದಾರೆ. ಅಪ್ರಾಪ್ತೆಯ ಮೇಲಿನ ಲೈಂಗಿಕ ದೌರ್ಜನ್ಯ ಹಿನ್ನೆಲೆಯಲ್ಲಿ ಪೋಕ್ಸೋ ಕಾಯ್ದೆ, ವಂಚನೆ, ಅತ್ಯಾಚಾರ, ಬೆದರಿಕೆ, ಹಣ ದೋಚಿಕೆ ಸೇರಿದಂತೆ ಹಲವು ಗಂಭೀರ ಸೆಕ್ಷನ್‌ಗಳಡಿ ಪ್ರಕರಣ ದಾಖಲಾಗಿದೆ.

ದೆವ್ವ ಹಿಡಿದಿದೆ ಎಂದು ಕಟ್ಟಿಗೆಯಿಂದ ಹೊಡೆದು ಕೊಲೆ

ಕಲಬುರಗಿ; ತಂತ್ರಜ್ಞಾನ ಯುಗದಲ್ಲಿಯೂ ಮೂಢನಂಬಿಕೆಗಳ ಅಂಧಕಾರ ಇನ್ನೂ ಜೀವಂತವಾಗಿರುವುದಕ್ಕೆ ಕಲಬುರಗಿಯ ಮಹಿಳೆಯೊಬ್ಬರ ದಾರುಣ ಸಾವು ಸಾಕ್ಷಿಯಾಗಿದೆ. ದೆವ್ವ ಹಿಡಿದಿದೆ ಎಂಬ ಅಸಂಬದ್ಧ ನಂಬಿಕೆಯ ಹೆಸರಿನಲ್ಲಿ ಮಹಿಳೆಯನ್ನು ಬೇವಿನ ಕಟ್ಟಿಗೆಯಿಂದ ಹೊಡೆದು ಕೊಲೆ ಮಾಡಿರುವ ಭೀಕರ ಘಟನೆ ಮಹಾರಾಷ್ಟ್ರದ ಸೋಲಾಪುರ ಜಿಲ್ಲೆಯ ಮುರುಮ್ ಗ್ರಾಮದಲ್ಲಿ ನಡೆದಿದೆ.

ಕೊಲೆಯಾದ ಮಹಿಳೆಯನ್ನು ಕಲಬುರಗಿ ಜಿಲ್ಲೆಯ ಆಳಂದ ಪಟ್ಟಣದ ವೆಂಕಟೇಶ್ವರ ನಗರ ನಿವಾಸಿ ಮುಕ್ತಬಾಯಿ ಎಂದು ಗುರುತಿಸಲಾಗಿದೆ. ಸುಮಾರು ಆರು ವರ್ಷಗಳ ಹಿಂದೆ ಮುಕ್ತಬಾಯಿಗೆ ಮುರುಮ್ ಗ್ರಾಮದ ಗಿಡ್ಡೆಪ್ಪ ಎಂಬುವನೊಂದಿಗೆ ಮದುವೆ ಮಾಡಿಕೊಡಲಾಗಿತ್ತು. ದಂಪತಿಗೆ ಐದು ವರ್ಷದ ಗಂಡು ಮಗನೂ ಇದ್ದನು. ಇತ್ತೀಚಿನ ದಿನಗಳಲ್ಲಿ ಮುಕ್ತಬಾಯಿಗೆ ದೆವ್ವ ಹಿಡಿದಿದೆ ಎಂದು ಆರೋಪಿಸಿದ ಗಂಡನ ಮನೆಯವರು, ಆಕೆಯ ಮೇಲೆ ಪದೇಪದೇ ಬೇವಿನ ಕಟ್ಟಿಗೆಯಿಂದ ಹಲ್ಲೆ ನಡೆಸಿದ್ದಾರೆ. ಈ ಬಗ್ಗೆ ಮಾತನಾಡಿದ ಮೃತಳ ತಾಯಿ ತಿಪ್ಪವ್ವ, ಮಗಳಿಗೆ ಯಾವುದೇ ದೆವ್ವ ಹಿಡಿದಿಲ್ಲ. ಅವಳನ್ನು ಹಿಂಸಿಸಬೇಡಿ ಎಂದು ಮನವಿ ಮಾಡಿದರೂ ಆಕೆಯ ಮಾತು ಕೇಳಲಿಲ್ಲ. ನಿನ್ನೆ ಗಂಡ ಮನೆಯಲ್ಲಿ ಇಲ್ಲದ ವೇಳೆ, ಐದು ವರ್ಷದ ಮಗನ ಎದುರಲ್ಲೇ ಮುಕ್ತಬಾಯಿಯ ಮೇಲೆ ಭೀಕರವಾಗಿ ಹಲ್ಲೆ ಮಾಡಲಾಗಿದೆ ಎಂದಿದ್ದಾರೆ.

ಹಲ್ಲೆಗೊಳಗಾದ ಮಹಿಳೆಯನ್ನು ಗಾಣಗಾಪುರದ ದತ್ತಾತ್ರೇಯ ದೇವಸ್ಥಾನಕ್ಕೆ ಕರೆದುಕೊಂಡು ಹೋಗಿ ಪೂಜೆ, ನದಿ ಸ್ನಾನ ಮಾಡಿಸಿ, ಪ್ರಜ್ಞಾಹೀನ ಸ್ಥಿತಿಯಲ್ಲಿ ಆಸ್ಪತ್ರೆಗೆ ದಾಖಲಿಸಿದ್ದಾರೆ. ಆದರೆ ತಲೆಗೆ ಗಂಭೀರ ಪೆಟ್ಟಾಗಿದ್ದರಿಂದ ಚಿಕಿತ್ಸೆ ಫಲಿಸದೇ ಮುಕ್ತಬಾಯಿ ಸಾವನ್ನಪ್ಪಿದ್ದಾರೆ ಎಂದು ತಿಳಿದುಬಂದಿದೆ. ಮೃತಳ ಸಹೋದರಿ ಶ್ರೀದೇವಿ, ಇದು ಮೂಢನಂಬಿಕೆಯ ಹೆಸರಿನ ನೇರ ಕೊಲೆ ಎಂದು ಆರೋಪಿಸಿ ಕಠಿಣ ಕ್ರಮಕ್ಕೆ ಆಗ್ರಹಿಸಿದ್ದಾರೆ. ಪ್ರಕರಣಕ್ಕೆ ಸಂಬಂಧಿಸಿ ಆಳಂದ ಪೊಲೀಸ್ ಠಾಣೆಯಲ್ಲಿ ಝೀರೋ ಎಫ್‌ಐಆರ್ ದಾಖಲಿಸಿ, ತನಿಖೆಯನ್ನು ಮಹಾರಾಷ್ಟ್ರದ ಮುರುಮ್ ಠಾಣೆ ಪೊಲೀಸರಿಗೆ ವರ್ಗಾಯಿಸಲಾಗಿದೆ.

ಡ್ರಗ್ಸ್ ಫ್ಯಾಕ್ಟರಿಗಳು ಸೀಜ್: 55.88 ಕೋಟಿ ರೂ. MDMA ಪೊಲೀಸ್ ವಶಕ್ಕೆ, ನಾಲ್ವರು ಅರೆಸ್ಟ್

ಬೆಂಗಳೂರು: ಕರ್ನಾಟಕದ ರಾಜಧಾನಿ ಬೆಂಗಳೂರಿನಲ್ಲಿ ಮಾದಕ ದ್ರವ್ಯಗಳ ತಯಾರಿಕೆ ಮತ್ತು ಸಾಗಾಟದ ದೊಡ್ಡ ಜಾಲವನ್ನು ಮಹಾರಾಷ್ಟ್ರದ ಮಾದಕ ವಸ್ತು ನಿಗ್ರಹ ದಳ (ANTF) ಭರ್ಜರಿ ದಾಳಿ ನಡೆಸಿದ್ದಾರೆ. ಮಹಾರಾಷ್ಟ್ರ ANTF ಕೊಂಕಣ ವಿಭಾಗದ ಪೊಲೀಸರು ಬೆಂಗಳೂರಿನ ವಿವಿಧೆಡೆ ದಾಳಿ ನಡೆಸಿ 55.88 ಕೋಟಿ ರೂ. ಮೌಲ್ಯದ MDMA ಸಿಂಥೆಟಿಕ್ ಡ್ರಗ್ಸ್ ಅನ್ನು ವಶಕ್ಕೆ ಪಡೆದುಕೊಂಡಿದ್ದು, ಈ ಸಂಬಂಧ ನಾಲ್ವರನ್ನು ಬಂಧಿಸಿದ್ದಾರೆ.

ಮುಂಬೈನಲ್ಲಿ ಇತ್ತೀಚೆಗೆ ನಡೆದ 1.5 ಕೋಟಿ ರೂ. ಮೌಲ್ಯದ ಡ್ರಗ್ಸ್ ಸೀಜ್ ಕಾರ್ಯಾಚರಣೆ ಮಾಡಲಾಗಿತ್ತು. ಆ ವೇಳೆ ಬಂಧಿತನಾಗಿದ್ದ ಅಬ್ದುಲ್ಲಾ ಖಾದರ್ ಶೇಕ್ ಎಂಬಾತನ ವಿಚಾರಣೆ ವೇಳೆ, ಡ್ರಗ್ಸ್ ತಯಾರಿಕೆ ಮತ್ತು ಪೂರೈಕೆ ಜಾಲದ ಕುರಿತು ಮಹತ್ವದ ಮಾಹಿತಿಗಳು ಹೊರಬಿದ್ದಿವೆ.

ಈ ಸುಳಿವಿನ ಆಧಾರದಲ್ಲಿ ಬೆಳಗಾವಿ ಮೂಲದ ಪ್ರಶಾಂತ್ ಯಲ್ಲಪ್ಪ ಪಾಟೀಲ್ ಎಂಬಾತನನ್ನು ಪೊಲೀಸರು ಬಂಧಿಸಿದ್ದರು. ಪಾಟೀಲ್ ನೀಡಿದ ಮಾಹಿತಿ ಮೇರೆಗೆ ಮಹಾರಾಷ್ಟ್ರ ANTF ತಂಡವು ಕರ್ನಾಟಕದ ರಾಜಧಾನಿ ಬೆಂಗಳೂರಿಗೆ ದಾಳಿ ನಡೆಸಿತ್ತು. ನಗರದ ಹೊರಮಾವು, ಯರಪ್ಪನಹಳ್ಳಿ ಹಾಗೂ ಕಣ್ಣೂರು ಸಮೀಪದ ಪ್ರದೇಶಗಳಲ್ಲಿ ಗುಪ್ತವಾಗಿ ಡ್ರಗ್ಸ್ ಫ್ಯಾಕ್ಟರಿಗಳು ಕಾರ್ಯನಿರ್ವಹಿಸುತ್ತಿದ್ದವು ಎಂಬುದು ಬೆಳಕಿಗೆ ಬಂದಿದೆ. "RJ ಇವೆಂಟ್" ಎಂಬ ಹೆಸರಿನಡಿ ಡ್ರಗ್ಸ್ ತಯಾರಿಕಾ ಕಾರ್ಖಾನೆ ನಡೆಸಲಾಗುತ್ತಿತ್ತು.

ದಾಳಿ ವೇಳೆ ಪೊಲೀಸರು 4.1 ಕೆಜಿ ಘನ ಮತ್ತು 17 ಕೆಜಿ ದ್ರವ ಸೇರಿ ಒಟ್ಟು 21.4 ಕೆಜಿ ಸಿಂಥೆಟಿಕ್ ಡ್ರಗ್ಸ್ ಅನ್ನು ವಶಕ್ಕೆ ಪಡೆದಿದ್ದಾರೆ. ಇದರ ಅಂದಾಜು ಮಾರುಕಟ್ಟೆ ಮೌಲ್ಯ 55.88 ಕೋಟಿ ರೂ. ಎಂದು ತಿಳಿದುಬಂದಿದೆ. ಜೊತೆಗೆ ಡ್ರಗ್ಸ್ ತಯಾರಿಕೆಗೆ ಬಳಸಲಾಗುತ್ತಿದ್ದ ಯಂತ್ರೋಪಕರಣಗಳು, ರಾಸಾಯನಿಕ ಪದಾರ್ಥಗಳು ಮತ್ತು ಇತರೆ ಸಾಮಗ್ರಿಗಳನ್ನೂ ಪೊಲೀಸರು ಜಪ್ತಿ ಮಾಡಿದ್ದಾರೆ.

ಈ ಕಾರ್ಯಾಚರಣೆಯಲ್ಲಿ ರಾಜಸ್ಥಾನ ಮೂಲದ ಸೂರಜ್ ರಮೇಶ್ ಯಾದವ್ ಮತ್ತು ಮಲ್ಖಾನ್ ರಾಮಲಾಲ್ ಬಿಷ್ಣೋಯ್ ಸೇರಿದಂತೆ ನಾಲ್ವರು ಆರೋಪಿಗಳನ್ನು ಬಂಧಿ ಸಲಾಗಿದೆ. ತನಿಖೆಯಲ್ಲಿ ರಾಜಸ್ಥಾನ ಮೂಲದ ಯೋಗಿರಾಜ್ ಕುಮಾರ್ ಮತ್ತು ನಯನ್ ಪವರ್ ಎಂಬವರು ಈ ಡ್ರಗ್ಸ್ ಜಾಲದ ಪ್ರಮುಖ ಕಿಂಗ್‌ಪಿನ್‌ಗಳು ಎಂಬ ಮಾಹಿತಿ ಲಭ್ಯವಾಗಿದೆ. ಇವರು ಕೇವಲ ಬೆಂಗಳೂರಲ್ಲಷ್ಟೇ ಅಲ್ಲದೆ, ದೇಶದ ಹಲವು ರಾಜ್ಯಗಳಲ್ಲಿ ಡ್ರಗ್ಸ್ ಪತ್ತೆಯಾದ ಈ ಫ್ಯಾಕ್ಟರಿಗಳಿಂದ ಮಹಾರಾಷ್ಟ್ರ, ಗೋವಾ, ಗುಜರಾತ್ ಸೇರಿದಂತೆ ಅನೇಕ ರಾಜ್ಯಗಳಿಗೆ ಡ್ರಗ್ಸ್ ಪೂರೈಕೆ ಮಾಡಲಾಗುತ್ತಿತ್ತು ಎಂಬ ಅನುಮಾನ ವ್ಯಕ್ತವಾಗಿದೆ. ಈ ಹಿನ್ನೆಲೆ ಬಂಧಿತ ಆರೋಪಿಗಳನ್ನು ಮಹಾರಾಷ್ಟ್ರ ಪೊಲೀಸರು ತೀವ್ರ ವಿಚಾರಣೆಗೆ ಒಳಪಡಿಸಿದ್ದು, ಡ್ರಗ್ಸ್ ಜಾಲದ ಇನ್ನಷ್ಟು ಕೊಂಡಿಗಳನ್ನು ಪತ್ತೆಹಚ್ಚಲು ಶೋಧ ಕಾರ್ಯ ಮುಂದುವರಿಸಿದ್ದಾರೆ. ಫ್ಯಾಕ್ಟರಿಗಳನ್ನು ನಡೆಸುತ್ತಿರುವ ಶಂಕೆ ವ್ಯಕ್ತವಾಗಿದೆ.

ಗೋಮಾಂಸ ಸಾಗಾಟ ಮಾಡುತ್ತಿದ್ದ ಬೈಕ್ ಸವಾರನ ಮೇಲೆ ನೈತಿಕ ಪೊಲೀಸ್‌ಗಿರಿ

ಮಂಗಳೂರು: ಅಕ್ರಮ ಗೋಮಾಂಸ ಸಾಗಾಟ ಮಾಡುತ್ತಿದ್ದ ಬೈಕ್ ತಡೆದು ವ್ಯಕ್ತಿ ಮೇಲೆ ನೈತಿಕ ಪೊಲೀಸ್‌ಗಿರಿ ನಡೆಸಿದ ಘಟನೆ ಮಂಗಳೂರಿನ ಮಳಲಿ-ನಾರ್ಲಪದವು ರಸ್ತೆಯಲ್ಲಿ ನಡೆದಿದೆ. ಮುಲ್ಲರಪಟ್ನ ನಿವಾಸಿ ಅಬ್ದುಲ್ ಸತ್ತಾರ್ ಎಂಬಾತ ಬೈಕ್‌ನಲ್ಲಿ ಹಿಂಬದಿಯಲ್ಲಿ ತನ್ನ 11 ವರ್ಷ ವಯಸ್ಸಿನ ಮಗಳೊಂದಿಗೆ 35 ಪ್ಯಾಕೇಟ್‌ಗಳಲ್ಲಿ 19 ಕೆ.ಜಿ ಗೋಮಾಂಸವನ್ನ ಸಾಗಾಟ ಮಾಡುತ್ತಿದ್ದ.

ಇದೇ ರಸ್ತೆಯಲ್ಲಿ ಟಾಟಾಸುಮೋದಲ್ಲಿ ಬರುತ್ತಿದ್ದ ಇಬ್ಬರು ಯುವಕರು ಗೋಮಾಂಸ ಸಾಗಾಟವನ್ನ ಗಮನಿಸಿ ಚೇಜ್ ಮಾಡಿ ಬೈಕ್ ತಡೆಯಲು ಯತ್ನಿಸಿದ್ದರು. ಈ ವೇಳೆ ಬೈಕ್ ಬಿದ್ದು ಬೈಕ್‌ನಲ್ಲಿದ್ದ ಬಾಲಕಿಗೆ ಸೈಲೆನ್ಸರ್ ತಾಗಿ ಗಾಯವಾಗಿದೆ. ಬೈಕ್ ಬಿದ್ದ ತಕ್ಷಣ ಬೈಕ್ ಹಾಗೂ ತನ್ನ ಮಗಳನ್ನು ಬಿಟ್ಟು ಅಬ್ದುಲ್ ಸತ್ತಾರ್ ಓಡಿ ಪರಾರಿಯಾಗಿದ್ದಾನೆ. ಬಳಿಕ ಸ್ಥಳೀಯರು ಅಬ್ದುಲ್ ಸತ್ತಾರ್‌ನ ಮಗಳನ್ನು ಆಸ್ಪತ್ರೆಗೆ ಸೇರಿಸಿದ್ದಾರೆ. ಬೈಕ್ ತಡೆದ ಸುಮಿತ್ ಭಂಡಾರಿ ಮತ್ತು ರಜತ್ ನಾಯ್ಕ್ ಅವರು ನನ್ನ ತಂದೆಗೆ ಹಲ್ಲೆ ನಡೆಸಿ ನೈತಿಕ ಪೊಲೀಸ್‌ಗಿರಿಯಾಗಿದೆ ಎಂದು ಅಬ್ದುಲ್ ಸತ್ತಾರ್‌ನ ಮಗಳು ನೀಡಿದ ಹೇಳಿಕೆ ಆಧರಿಸಿ ಬಜಪೆ ಪೊಲೀಸರು ಪ್ರಕರಣ ದಾಖಲಿಸಿ ಇಬ್ಬರನ್ನು ಬಂಧಿಸಿದ್ದಾರೆ.

ಯಾವುದೇ ದಾಖಲೆ ಇಲ್ಲದೆ ಅನಧಿಕೃತ ಗೋಮಾಂಸ ಸಾಗಾಟ ಮಾಡಿದ ಆರೋಪದಲ್ಲಿ ಅಬ್ದುಲ್ ಸತ್ತಾರ್ ವಿರುದ್ಧ ಬಜಪೆ ಪೊಲೀಸ್ ಠಾಣೆಯಲ್ಲಿ ಸುಮೋಟೊ ಪ್ರಕರಣ ದಾಖಲಾಗಿದೆ

ಮಹಿಳೆ ಮೇಲೆ ಮಾರಣಾಂತಿಕ ಹಲ್ಲೆ ಮಾಡಿ, ಸರಗಳ್ಳತನ – ಆರೋಪಿಗಳು ಅರೆಸ್ಟ್

ವಿಜಯಪುರ: ನಗರದಲ್ಲಿ ಮಹಿಳೆ ಮೇಲೆ ಮಾರಣಾಂತಿಕ ಹಲ್ಲೆ ನಡೆಸಿ, ಸರಗಳ್ಳತನ ಮಾಡಿದ್ದ ಪ್ರಕರಣ ಸಂಬಂಧ `ಪಬ್ಲಿಕ್ ಟಿವಿ' ವಿಸ್ತೃತ ವರದಿ ಬೆನ್ನಲ್ಲೇ ಗುರುತಿಸಲಾಗಿದೆ. ಇತ್ತೀಚಿಗಷ್ಟೇ ವಿಜಯಪುರ ನಗರದ ಮಹಿಳೆಯೊಬ್ಬರು ದಿವಟಗೇರಿ ಬಡವಾಣೆಯಲ್ಲಿನ ಅಂಗಡಿಗೆ ತೆರಳಿದ್ದರು. ಆಗ ಆರೋಪಿಗಳಿಬ್ಬರು ಇಬ್ಬರು ಆರೋಪಿಗಳನ್ನು ಪೊಲೀಸರು ಬಂಧಿಸಿದ್ದಾರೆ. ಬಂಧಿತ ಆರೋಪಿಗಳನ್ನು ಆಸೀಫ್ ಜಮಾದಾರ್ ಹಾಗೂ ರಿಹಾನ್ ಮಣಿಯಾರ್ ಎಂದು ಪರಾರಿಯಾಗಿದ್ದರು. ಈ ಸಂಬಂಧ `ಪಬ್ಲಿಕ್ ಟಿವಿ' ವಿಸ್ತೃತ

ಮೆಟ್ರೋದಲ್ಲಿ ಜೋರಾಗಿ ಮೊಬೈಲ್ ಸೌಂಡ್, ತಿಂಡಿ ತಿಂದರೆ ದಂಡ

ಬೆಂಗಳೂರು: ನಿತ್ಯ ನಗರದ ಟ್ರಾಫಿಕ್ ಮಧ್ಯೆ ಬೇರೆಬೇರೆ ಪ್ರದೇಶಗಳಿಗೆ ವೇಗವಾಗಿ ತಲುಪಲು ಮೆಟ್ರೋ ಅತಿಹೆಚ್ಚು ಸಹಾಯಕವಾಗಿದೆ. ಅಲ್ಲದೇ ನಗರದ ಬಹುತೇಕ ಪ್ರಯಾಣಿಕರ ಮೊದಲ ಆಯ್ಕೆ ಕೂಡ ಮೆಟ್ರೋ. ಆದರೆ ಮೆಟ್ರೋ ಬಳಕೆದಾರರ ಸಂಖ್ಯೆ ಹೆಚ್ಚಾದಂತೆ ಕೆಲವರು, ರೂಲ್ಸ್‌ಗಳ ಕಡೆ ಹೆಚ್ಚು ಗಮನ ನೀಡದೆ, ರೂಲ್ಸ್ ಬ್ರೇಕ್ ಮಾಡುತ್ತಿದ್ದಾರೆ.

ಅದರಲ್ಲೂ ಮೊಬೈಲ್ ಬಳಕೆಯಿಂದಲೇ ಬಹುತೇಕ ರೂಲ್ಸ್ ಬ್ರೇಕ್‌ಗೆ ಕಾರಣವಾಗುತ್ತಿದೆ. ಇದರಿಂದ, ಸಹ ಪ್ರಯಾಣಿಕರಿಗೂ ಕಿರಿಕಿರಿ ಉಂಟು ಮಾಡುತ್ತಿದ್ದು, ಒಂದೇ ತಿಂಗಳಲ್ಲಿ ಬಿಎಂಆರ್‌ಸಿಎಲ್‌ಗೆ ಸಾವಿರಾರು ಸಂಖ್ಯೆಯಲ್ಲಿ ದೂರು ದಾಖಲಾಗಿದೆ. ಪರಿಣಾಮ ಇದಕ್ಕೆ ಕಡಿವಾಣ ಹಾಕುವ ನಿಟ್ಟಿನಲ್ಲಿ, ಮೆಟ್ರೋ ಆಡಳಿತ ಮಂಡಳಿ

ಮಹತ್ವದ ನಿರ್ಧಾರಕ್ಕೆ ಬಂದಿದೆ. ಮೆಟ್ರೋದಲ್ಲಿ ಕೂತಾಗ ಟೈಮ್ ಪಾಸ್ ಮಾಡೋದಕ್ಕೆ ಬಹುತೇಕ ಜನ ಮೊಬೈಲ್ ಬಳಕೆ ಮಾಡುತ್ತಾರೆ.

ಕೆಲವೊಮ್ಮೆ ರೀಲ್ಸ್ ಸ್ಕ್ರಾಲ್, ಕೆಲವರಿಂದ ಯುಟ್ಯೂಬ್ ವೀಕ್ಷಣೆ, ಹಲವರು ಬ್ಲೂಟೂತ್ ಹಾಕಿ ಏರುಧ್ವನಿಯಲ್ಲಿ ಮಾತನಾಡೋದು ಈಗ ಹಲವು ಸಹ ಪ್ರಯಾಣಿಕರ ಕಿರಿಕಿರಿಗೆ ಕಾರಣವಾಗಿದೆ. ಮೆಟ್ರೋ ಟ್ರಾವೆಲಿಂಗ್ ವೇಳೆ ಸೌಂಡ್ ಜಾಸ್ತಿ ಇಟ್ಟುಕೊಂಡು ಮೊಬೈಲ್ ಬಳಕೆ ಮಾಡಬಾರದು ಅನ್ನೋ ನಿಯಮ ಇದ್ದರೂ ಉಲ್ಲಂಘನೆ ಆಗುತ್ತಿದೆ. ಇದೇ ಕಾರಣಕ್ಕೆ ದಂಡಾಸ್ತ್ರ ಪ್ರಯೋಗಕ್ಕೆ ಬಿಎಂಆರ್‌ಸಿಎಲ್ ಮುಂದಾಗಿದೆ ಇನ್ನು ಮೊಬೈಲ್ ಅಲ್ಲಿ ವಾಲ್ಯೂಮ್ ಜಾಸ್ತಿ ಕೊಡುವುದು, ಬ್ಲೂಟೂತ್ ಬಳಕೆ ಮಾಡಿ ಗಟ್ಟಿಯಾಗಿ ಮಾತನಾಡಿ ಇತರೆ ಪ್ರಯಾಣಿಕರಿಗೆ ಕಿರಿಕಿರಿ ಉಂಟು ಮಾಡುವುದು, ಅಲ್ಲಲ್ಲಿ ಊಟ, ತಿಂಡಿ ಮಾಡುವುದು, ತಂಬಾಕು ಸೇವನೆ ಮಾಡುವ ದೂರು ಕಂಡು ಬರುತ್ತಲೇ ಇದೆ.

ಡಿಸೆಂಬರ್ 5ರಿಂದ 25ರವರೆಗಿನ ಡೇಟಾ ಪ್ರಕಾರ 6,520 ಮಂದಿ ವಿರುದ್ಧ ಲೌಡ್ ಸೌಂಡ್ ಕೇಸ್ ದಾಖಲಾಗಿದೆ. ಮೆಟ್ರೋದಲ್ಲಿ ತಿಂಡಿ ತಿಂದು 268 ಕೇಸ್ ದಾಖಲು ಆಗಿದೆ. ತಂಬಾಕು ಸೇವನೆಯ ಅಡಿ 641 ದೂರು ರಿಜಿಸ್ಟರ್ ಆಗಿದೆ ಇನ್ನು ನಮ್ಮ ಮೆಟ್ರೋದಲ್ಲಿ ಕಳೆದ ಒಂದು ವರ್ಷದಿಂದ ಈ ಬಗ್ಗೆ ಸರ್‌ಪ್ರೈಸ್ ತಪಾಸಣೆ ಮಾಡಲಾಗುತ್ತಿದೆ.

ಹಲವು ಬಾರಿ ಹಲವರಿಗೆ ವಾರ್ನಿಂಗ್ ಕೊಟ್ಟು ಕೊಟ್ಟು ಸಾಕಾದ ಹಿನ್ನೆಲೆ ದಂಡಾಸ್ತ್ರ ಪ್ರಯೋಗಕ್ಕೆ ಬಿಎಂಆರ್‌ಸಿಎಲ್ ಪ್ಲ್ಯಾನ್ ಮಾಡುತ್ತಿದ್ದು, ಶೀಘ್ರದಲ್ಲೇ ಫೈನ್ ಅಸ್ತ್ರ ಪ್ರಯೋಗ ಪ್ಲಾನ್ ಅನುಷ್ಠಾನಕ್ಕೆ ಬರಲಿದೆ.

ಮೋದಿ ಹಳೆಯ ಫೋಟೋ ಪೋಸ್ಟ್ ಮಾಡಿ ಬಿಜೆಪಿ-RSS ಶಕ್ತಿ ಶ್ಲಾಘಿಸಿದ ದಿಗ್ವಿಜಯ್ ಸಿಂಗ್

ನವದೆಹಲಿ: ಕಾಂಗ್ರೆಸ್ ಹಿರಿಯ ನಾಯಕ ಮತ್ತು ರಾಜ್ಯಸಭಾ ಸದಸ್ಯ ದಿಗ್ವಿಜಯ ಸಿಂಗ್ ಅವರು ಬಿಜೆಪಿ ಹಾಗೂ RSS ಸಂಘಟನಾ ಶಕ್ತಿಯನ್ನು ಬಹಿರಂಗವಾಗಿ ಶ್ಲಾಘಿಸಿರುವುದು ರಾಜಕೀಯ ವಲಯದಲ್ಲಿ ದೊಡ್ಡ ವಿವಾದಕ್ಕೆ ಕಾರಣವಾಗಿದೆ. ಸಾಮಾಜಿಕ ಮಾಧ್ಯಮ ಎಕ್ಸ್‌ನಲ್ಲಿ ಹಂಚಿಕೊಂಡ ಹಳೆಯ ಫೋಟೋವೊಂದರ ಮೂಲಕ ಅವರು ಈ ಪ್ರಶಂಸೆ ವ್ಯಕ್ತಪಡಿಸಿದ್ದಾರೆ.

ಪಕ್ಷದೊಳಗಿನ ಆಂತರಿಕ ಸುಧಾರಣೆಗಳ ಅಗತ್ಯವಿದೆ ಎಂದು ರಾಹುಲ್ ಗಾಂಧಿ ಅವರಿಗೆ ಇತ್ತೀಚೆಗೆ ಸೂಚಿಸಿದ್ದ ದಿಗ್ವಿಜಯ್ ಸಿಂಗ್, ಇದೀಗ ತಮ್ಮದೇ ಪಕ್ಷದ ವಿರುದ್ಧ ತೀಕ್ಷ್ಣ ಸಂದೇಶ ರವಾನಿಸಿದಂತಾಗಿದೆ ಎಂಬ ಅಭಿಪ್ರಾಯ ವ್ಯಕ್ತವಾಗಿದೆ. ಶನಿವಾರ ಬೆಳಿಗ್ಗೆ ದಿಗ್ವಿಜಯ್ ಸಿಂಗ್ ತಮ್ಮ ಸಾಮಾಜಿಕ ಜಾಲತಾಣ 'ಎಕ್ಸ್'ನಲ್ಲಿ (ಹಳೆಯ ಟ್ವಿಟರ್) 1990ರ ದಶಕದ ಒಂದು ಕಪ್ಪು-ಬಿಳುಪು ಚಿತ್ರವನ್ನು ಹಂಚಿಕೊಂಡಿದ್ದರು. ಆ ಚಿತ್ರದಲ್ಲಿ ಬಿಜೆಪಿ ಹಿರಿಯ ನಾಯಕ ಎಲ್.ಕೆ. ಅಡ್ವಾಣಿ ಅವರ ಸಮೀಪ ನೆಲದ ಮೇಲೆ ಕುಳಿತಿರುವ ಯುವ ನರೇಂದ್ರ ಮೋದಿ ಕಾಣಿಸುತ್ತಾರೆ. ಈ ಚಿತ್ರವನ್ನು ಉಲ್ಲೇಖಿಸಿದ ಸಿಂಗ್, ಸಂಘ-ಬಿಜೆಪಿ ಪರಿಸರ ವ್ಯವಸ್ಥೆಯಲ್ಲಿ ತಳಮಟ್ಟದ ಕಾರ್ಯಕರ್ತನಿಗೂ ಉನ್ನತ ಸ್ಥಾನಕ್ಕೇರಲು ಅವಕಾಶವಿದೆ ಎಂಬುದನ್ನು ಹೊಗಳಿದ್ದಾರೆ.

"ಒಮ್ಮೆ ನೆಲದ ಮೇಲೆ ಕುಳಿತಿದ್ದ ಕಾರ್ಯಕರ್ತನೊಬ್ಬ ಸಂಘ-ಬಿಜೆಪಿ ವ್ಯವಸ್ಥೆಯಲ್ಲಿ ಬೆಳೆದು ಮುಖ್ಯಮಂತ್ರಿಯಾಗಿ, ನಂತರ ಪ್ರಧಾನಿಯಾಗುವ ಮಟ್ಟಕ್ಕೆ ಏರುತ್ತಾನೆ" ಎಂದು ಹೇಳಿರುವ ದಿಗ್ವಿಜಯ್ ಸಿಂಗ್, ಸಂಘಟನೆಯ ಶಿಸ್ತು ಮತ್ತು ಅವಕಾಶ ವ್ಯವಸ್ಥೆಯನ್ನು

ಶ್ಲಾಘಿಸಿದ್ದಾರೆ. ಈ ಪೋಸ್ಟ್‌ನ ಅಂತ್ಯದಲ್ಲಿ ಅವರು "ಜೈ ಶ್ರೀಯಾ ರಾಮ್" ಎಂದು ಬರೆದಿರುವುದು ಚರ್ಚೆಗೆ ಕಾರಣವಾಗಿದೆ.

ಈ ಹೇಳಿಕೆಯನ್ನು ಬಿಜೆಪಿ ತಕ್ಷಣವೇ ತಮ್ಮ ರಾಜಕೀಯ ಅಸ್ತ್ರವಾಗಿ ಬಳಸಿಕೊಂಡಿದೆ. ಬಿಜೆಪಿ ವಕ್ತಾರ ಸಿಆರ್ ಕೇಶವನ್, "ಇದು ಕಾಂಗ್ರೆಸ್‌ನ ಆಂತರಿಕ ನಿರಂಕುಶತೆ ಮತ್ತು ಪ್ರಜಾಪ್ರಭುತ್ವ ವಿರೋಧಿ ನಿಲುವಿನ ಮೇಲೆ ಸಿಡಿದ ಸತ್ಯದ ಬಾಂಬ್" ಎಂದು ಕಟುವಾಗಿ ಪ್ರತಿಕ್ರಿಯಿಸಿದ್ದಾರೆ. "ರಾಹುಲ್ ಗಾಂಧಿ ಈ ಸತ್ಯವನ್ನು ಎದುರಿಸಲು ಧೈರ್ಯ ತೋರಿಸುತ್ತಾರೆಯೇ?" ಎಂದು ಅವರು ಸಾಮಾಜಿಕ ಜಾಲತಾಣದಲ್ಲಿ ಪ್ರಶ್ನಿಸಿದ್ದಾರೆ. ಇನ್ನೊಬ್ಬ ಬಿಜೆಪಿ ವಕ್ತಾರ ಪ್ರದೀಪ್ ಭಂಡಾರಿ, ದಿಗ್ವಿಜಯ್ ಸಿಂಗ್ ಅವರ ಪೋಸ್ಟ್ ಕಾಂಗ್ರೆಸ್ ನೊಳಗಿನ ಭಿನ್ನಾಭಿಪ್ರಾಯಕ್ಕೆ ಸ್ಪಷ್ಟ ಸಾಕ್ಷಿಯಾಗಿದೆ ಎಂದು ಹೇಳಿದ್ದಾರೆ. "ಕಾಂಗ್ರೆಸ್ ನಾಯಕರು ಈಗ ತಮ್ಮದೇ ಪಕ್ಷದ ವೈಫಲ್ಯಗಳನ್ನು ಬಹಿರಂಗವಾಗಿ ಒಪ್ಪಿಕೊಳ್ಳುತ್ತಿದ್ದಾರೆ" ಎಂಬ ವ್ಯಂಗ್ಯ ಮಾಡಿದ್ದಾರೆ.

ದಿಗ್ವಿಜಯ್ ಸಿಂಗ್ ಅವರ ಈ ಪೋಸ್ಟ್ ಕಾಂಗ್ರೆಸ್ ವಲಯದಲ್ಲಿ ವ್ಯಾಪಕ ಚರ್ಚೆಗೆ ಕಾರಣವಾಗಿದೆ. ಈ ಪೋಸ್ಟ್ ಕೇವಲ ವೈಯಕ್ತಿಕ ಅಭಿಪ್ರಾಯವಲ್ಲ, ಬದಲಾಗಿ ಪಕ್ಷದ ಹೈಕಮಾಂಡ್‌ಗೆ ನೀಡಿರುವ ನೇರ ಸಂದೇಶ ಎಂದು ಅನೇಕರು ವಿಶ್ಲೇಷಿಸುತ್ತಿದ್ದಾರೆ. ಅವರು ತಮ್ಮ ಪೋಸ್ಟ್‌ನಲ್ಲಿ ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ರಾಹುಲ್ ಗಾಂಧಿ, ಪ್ರಿಯಾಂಕಾ ಗಾಂಧಿ ವಾದ್ರಾ ಹಾಗೂ ಅಧಿಕೃತ ಕಾಂಗ್ರೆಸ್ ಎಕ್ಸ್ ಹ್ಯಾಂಡಲ್ ಅನ್ನು ಟ್ಯಾಗ್ ಮಾಡಿದ್ದಾರೆ.

ಹೊಸ ವರ್ಷದ ಸಂಭ್ರಮಕ್ಕೆ 'ಖಾಕಿ' ಹೈ ಅಲರ್ಟ್ ಬೆಂಗಳೂರು ಪೊಲೀಸರ ಭರ್ಜರಿ ಸಿದ್ಧತೆ

ಬೆಂಗಳೂರು: 2025ಕ್ಕೆ ವಿದಾಯ ಹೇಳಿ 2026ನ್ನು ಸ್ವಾಗತಿಸುವ ಕ್ಷಣಕ್ಕೆ ಸಿಲಿಕಾನ್ ಸಿಟಿ ಬೆಂಗಳೂರು ಸಜ್ಜಾಗಿದೆ. ಹೊಸ ವರ್ಷಾಚರಣೆಯ ಸಂಭ್ರಮ ನಗರದೆಲ್ಲೆಡೆ ಜೋರಾಗುತ್ತಿರುವ ಹಿನ್ನೆಲೆ, ಯಾವುದೇ ಅಹಿತಕರ ಘಟನೆಗಳಿಗೆ ಅವಕಾಶ ನೀಡದಂತೆ ಬೆಂಗಳೂರು ಪೊಲೀಸರು ಕಟ್ಟುನಿಟ್ಟಿನ ಭದ್ರತಾ ಕ್ರಮಗಳನ್ನು ಜಾರಿಗೊಳಿಸಿದ್ದಾರೆ. ಇದರಿಂದಾಗಿ ಡಿಸೆಂಬರ್ 31ರ ಸಂಜೆಯಿಂದಲೇ ನಗರಾದ್ಯಂತ ಖಾಕಿ ಪಡೆ ಹೈ ಅಲರ್ಟ್ ಆಗಿದ್ದಾರೆ.

ಹೊಸ ವರ್ಷದ ಸಂಭ್ರಮದಲ್ಲಿ ಲಕ್ಷಾಂತರ ಜನರು ರಸ್ತೆಗೆ ಇಳಿಯುವ ನಿರೀಕ್ಷೆ ಇರುವುದರಿಂದ, ಸಾರ್ವಜನಿಕರ ಸುರಕ್ಷತೆ, ಸಂಚಾರ ನಿಯಂತ್ರಣ ಹಾಗೂ ಮಹಿಳೆಯರ ರಕ್ಷಣೆಗೆ ಪೊಲೀಸರು ವಿಶೇಷ ಯೋಜನೆ ರೂಪಿಸಿದ್ದಾರೆ. ನಗರದ ಪ್ರಮುಖ ಜಂಕ್ಷನ್‌ಗಳು, ವಾಣಿಜ್ಯ ಪ್ರದೇಶಗಳು, ಐಟಿ-ಬಿಟಿ ಹಬ್‌ಗಳು, ಬಾರ್-ರೆಸ್ಟೋರೆಂಟ್ ಪ್ರದೇಶಗಳು ಮತ್ತು ಜನಸಂದಣಿ ಹೆಚ್ಚಿರುವ ಸ್ಥಳಗಳಲ್ಲಿ ಹೆಚ್ಚುವರಿ ಪೊಲೀಸ್ ಸಿಬ್ಬಂದಿಯನ್ನು ನಿಯೋಜಿಸಲಾಗಿದೆ.

ನಗರ ಪೊಲೀಸ್ ಆಯುಕ್ತ ಸೀಮಂತ್ ಕುಮಾರ್ ಸಿಂಗ್ ಅವರು ಸ್ವತಃ ನಗರದಲ್ಲಿ ರೌಂಡ್ಸ್ ನಡೆಸಿ ಭದ್ರತಾ ವ್ಯವಸ್ಥೆಗಳನ್ನು ಪರಿಶೀಲಿಸಿದರು. ನ್ಯೂ ಇಯರ್ ವೇಳೆ ಯಾವ ರೀತಿಯ ಕ್ರಮಗಳನ್ನು ಕೈಗೊಳ್ಳಬೇಕು ಎಂಬುದರ ಕುರಿತು ಪೊಲೀಸ್ ಆಯುಕ್ತರ ಕಚೇರಿಯಲ್ಲಿ ಉನ್ನತ ಮಟ್ಟದ ಸಭೆ ಕೂಡ ನಡೆಸಲಾಗಿದೆ. ಈ ಸಭೆಯಲ್ಲಿ ಸಂಚಾರ ನಿರ್ಬಂಧ, ಫ್ಲೈಓವರ್‌ಗಳ ಓಪನ್ ಅಥವಾ ಕ್ಲೋಸ್ ನಿರ್ಧಾರ, ಜನಸಂದಣಿ ನಿಯಂತ್ರಣ ಹಾಗೂ ತುರ್ತು ಸೇವೆಗಳ ಸಂಯೋಜನೆ ಕುರಿತು ಚರ್ಚೆ ನಡೆದಿದೆ.

ಎಲೆಕ್ಟ್ರಾನಿಕ್ಸ್ ಸಿಟಿಯಲ್ಲಿ ಹೈ ಅಲರ್ಟ್

ಐಟಿ-ಬಿಟಿ ಉದ್ಯೋಗಿಗಳು ಹೆಚ್ಚಿರುವ ಎಲೆಕ್ಟ್ರಾನಿಕ್ಸ್ ಸಿಟಿ ಪ್ರದೇಶದಲ್ಲಿ ವಿಶೇಷ ಭದ್ರತಾ ಕ್ರಮಗಳನ್ನು ಕೈಗೊಳ್ಳಲಾಗಿದೆ. ಜಂಟಿ ಪೊಲೀಸ್ ಆಯುಕ್ತ ರಮೇಶ್ ಬಾನೋತ್ ಅವರು ಡಿಸಿಪಿ ಎಂ. ನಾರಾಯಣ್ ಅವರೊಂದಿಗೆ ಸ್ಥಳ ಪರಿಶೀಲನೆ ನಡೆಸಿದರು. ಬಸ್ ನಿಲ್ದಾಣಗಳು, ಆಸ್ಪತ್ರೆಗಳು, ಮೆಟ್ರೋ ರೈಲು ಸಂಪರ್ಕ ಮಾರ್ಗಗಳು ಹಾಗೂ ಪಾದಚಾರಿಗಳ ಸಂಚಾರ ಹೆಚ್ಚಿರುವ ಸ್ಥಳಗಳನ್ನು ಸೂಕ್ಷ್ಮವಾಗಿ ಪರಿಶೀಲಿಸಲಾಗಿದೆ. ಯಾವುದೇ ಅಹಿತಕರ ಘಟನೆಗಳು ನಡೆಯದಂತೆ ಮುನ್ನೆಚ್ಚರಿಕೆ ಕ್ರಮಗಳ ಜತೆಗೆ ಸಿಸಿಟಿವಿ ಕ್ಯಾಮೆರಾಗಳ ಮೂಲಕ ನಿರಂತರ ನಿಗಾ ವಹಿಸಲಾಗಿದೆ.

ಮಹಿಳೆಯರ ಸುರಕ್ಷತೆಗೆ ವಿಶೇಷ ಗಮನ

ಹೊಸ ವರ್ಷದ ಸಂಭ್ರಮದಲ್ಲಿ ಮಹಿಳೆಯರ ಸುರಕ್ಷತೆಗೆ ವಿಶೇಷ ಒತ್ತು ನೀಡಲಾಗಿದೆ. ರಾಣಿ ಚೆನ್ನಮ್ಮ ಪಡೆಯನ್ನು ಪ್ರಮುಖ ಪ್ರದೇಶಗಳಲ್ಲಿ ನಿಯೋಜಿಸಲಾಗಿದೆ. ಮಹಿಳೆಯರಿಗೆ ಕಿರುಕುಳ ನೀಡುವವರ ವಿರುದ್ಧ ಕಠಿಣ ಕ್ರಮ ಕೈಗೊಳ್ಳುವುದಾಗಿ ಪೊಲೀಸರು ಎಚ್ಚರಿಕೆ ನೀಡಿದ್ದಾರೆ. ಎಲೆಕ್ಟ್ರಾನಿಕ್ಸ್ ಸಿಟಿ ಇನ್ಸ್‌ಪೆಕ್ಟರ್ ನವೀನ್ ಕುಮಾರ್ ಅವರು ಮಾತನಾಡಿ, ಮಹಿಳೆಯರ ರಕ್ಷಣೆಗೆ ವಿಶೇಷ ಪ್ಯಾಟ್ರೋಲಿಂಗ್, ತಕ್ಷಣ ಸ್ಪಂದಿಸುವ ತಂಡಗಳು ಹಾಗೂ ಸಹಾಯವಾಣಿ ವ್ಯವಸ್ಥೆ ಸಿದ್ಧವಾಗಿದೆ ಎಂದು ತಿಳಿಸಿದ್ದಾರೆ.

ಸಂಚಾರ ನಿಯಂತ್ರಣ ಮತ್ತು ಸಾರ್ವಜನಿಕರಿಗೆ ಮನವಿ

ಡಿಸೆಂಬರ್ 31ರ ರಾತ್ರಿ ಕೆಲವು ಪ್ರಮುಖ ರಸ್ತೆಗಳಲ್ಲಿ ಸಂಚಾರ ನಿರ್ಬಂಧ ಜಾರಿಯಾಗುವ ಸಾಧ್ಯತೆ ಇದೆ. ಮದ್ಯಪಾನ ಮಾಡಿ ವಾಹನ ಚಾಲನೆ ಮಾಡುವವರ ವಿರುದ್ಧ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಲಾಗುತ್ತದೆ. ಸಾರ್ವಜನಿಕರು ಸಹಕರಿಸಬೇಕು, ಸಂಭ್ರಮವನ್ನು ಸಂಯಮದಿಂದ ಆಚರಿಸಬೇಕು ಹಾಗೂ ಪೊಲೀಸ್ ಸೂಚನೆಗಳನ್ನು ಪಾಲಿಸಬೇಕು ಎಂದು ಬೆಂಗಳೂರು ಪೊಲೀಸರು ಮನವಿ ಮಾಡಿದ್ದಾರೆ.

ಕಂಪ್ಲೆಂಟ್ ಕೊಡೋಕೆ ಹೋಗಿ ಖಾಕಿ ಪ್ರೀತಿಯಲ್ಲಿ ಬಿದ್ದ ಲೇಡಿ

ವಿಜಯಪುರ : ಪೊಲೀಸ್ ಇಲಾಖೆಯ ಗೌರವಕ್ಕೆ ಧಕ್ಕೆ ತರುವಂತಹ ಗಂಭೀರ ಆರೋಪ ವಿಜಯಪುರದಲ್ಲಿ ಕೇಳಿಬಂದಿವೆ. ದೂರು ನೀಡಲು ಪೊಲೀಸ್ ಠಾಣೆಗೆ ಹೋದ ಗೃಹಿಣಿಯನ್ನೇ ಪಿಎಸ್‌ಐ ಒಬ್ಬರು ಬಲೆಗೆ ಬೀಳಿಸಿಕೊಂಡು, ಆಕೆಯ ಸಂಸಾರ ಹಾಳು ಮಾಡಿರುವ ಆರೋಪ ಕೇಳಿ ಬಂದಿದೆ.

ಆಲಮೇಲ ಪಟ್ಟಣದ ನಿವಾಸಿ ಭೀಮಾಶಂಕರ ಹೋಳ್ಕರ್ ಎಂಬುವರು, ಬಸವನ ಬಾಗೇವಾಡಿ ಪೊಲೀಸ್ ಠಾಣೆಯ ಪಿಎಸ್‌ಐ ಮನೋಹರ್ ಕಂಚಗಾರ್ ವಿರುದ್ಧ ಗಂಭೀರ ಆರೋಪಗಳನ್ನು ಮಾಡಿದ್ದಾರೆ. ತಮ್ಮ ಪತ್ನಿ ಅನುರಾಧ ಅವರೊಂದಿಗೆ ಪಿಎಸ್‌ಐ ಮನೋಹರ್ ಅಕ್ರಮ ಸಂಬಂಧ ಹೊಂದಿದ್ದಾರೆ ಎಂದು ಭೀಮಾಶಂಕರ ಆರೋಪಿಸಿದ್ದಾರೆ ಸುಮಾರು ಐದು ವರ್ಷಗಳ ಹಿಂದೆ ಮನೋಹರ್ ಕಂಚಗಾರ್ ಅವರು ಆಲಮೇಲ ಪೊಲೀಸ್ ಠಾಣೆಯಲ್ಲಿ ಎಎಸ್‌ಐ ಆಗಿ ಕರ್ತವ್ಯ ನಿರ್ವಹಿಸುತ್ತಿದ್ದರು. ಆ ಸಮಯದಲ್ಲಿ ಕುಟುಂಬ ಕಲಹದ ಹಿನ್ನೆಲೆ ಅನುರಾಧ ಅವರು ಠಾಣೆಗೆ ದೂರು ನೀಡಲು ಹೋಗಿದ್ದರು. ಈ ವೇಳೆ ದೂರು ವಿಚಾರಣೆ ನೆಪದಲ್ಲಿ ಮನೋಹರ್ ಮತ್ತು ಅನುರಾಧ ನಡುವೆ ಪ್ರೀತಿ ಬೆಳೆದಿತ್ತು ಎಂಬ ಆರೋಪವನ್ನು ಪತಿ ಮಾಡಿದ್ದಾರೆ.

ಭೀಮಾಶಂಕರ ಅವರು ಬೆಂಗಳೂರಿನಲ್ಲಿ ಕೆಲಸ ಮಾಡುತ್ತಿದ್ದರು. ಈ ಅಕ್ರಮ ಸಂಬಂಧದ ವಿಚಾರ ಕುಟುಂಬದವರಿಗೆ ತಿಳಿದ ಬಳಿಕ, ಭೀಮಾಶಂಕರ ಅವರು ತಮ್ಮ ಪತ್ನಿ ಮತ್ತು ಮಕ್ಕಳನ್ನು ಬಿಟ್ಟು ವಾಪಸ್ ಆಲಮೇಲಕ್ಕೆ ಬರುವಂತಾಯಿತು ಎಂದು ತಿಳಿಸಿದ್ದಾರೆ. ಬಳಿಕ ಮಗನಿಂದ ಭೀಮಾಶಂಕರ ಅವರಿಗೆ ಕರೆ ಬಂದಿದ್ದು, "ಮನೋಹರ್ ಹಾಗೂ ಅನುರಾಧ ಇಬ್ಬರೂ ನನಗೆ ಕಿರುಕುಳ ನೀಡುತ್ತಿದ್ದಾರೆ. ಕರೆದುಕೊಂಡು ಹೋಗಿ" ಎಂದು ಮಗ ಮನವಿ ಮಾಡಿದ್ದಾನೆ ಎನ್ನಲಾಗಿದೆ.

ಇನ್ನೂ ಗಂಭೀರ ಆರೋಪ ಮಾಡಿರುವ ಭೀಮಾಶಂಕರ, "ನನ್ನ ಮಗನಿಗೆ 'ಅಪ್ಪಾ' ಎಂದು ಮನೋಹರ್ ಹೇಳಿಸಿಕೊಂಡಿದ್ದಾರೆ. ಇದನ್ನು ವಿರೋಧಿಸಿದಾಗ ನನ್ನ ಮಗ ಹಾಗೂ ನನಗೆ, ಅನುರಾಧ ಮತ್ತು ಮನೋಹರ್ ಹಲ್ಲೆ ಮಾಡಿದ್ದಾರೆ" ಎಂದು ದೂರಿದ್ದಾರೆ. ಪಿಎಸ್‌ಐ ಮನೋಹರ್ ಅವರು ತಮ್ಮ ಕುಟುಂಬಕ್ಕೆ ಮಾನಸಿಕ ಮತ್ತು ದೈಹಿಕ ಕಿರುಕುಳ ನೀಡುತ್ತಿದ್ದಾರೆ ಎಂದು ಅವರು ಆರೋಪಿಸಿದ್ದಾರೆ. "ನನಗೆ ನ್ಯಾಯ ಬೇಕು. ನನ್ನ ಹೆಂಡ್ತಿ ಮತ್ತು ಮಕ್ಕಳನ್ನು ವಾಪಸ್ ಕೊಡಬೇಕು" ಎಂದು ಭೀಮಾಶಂಕರ ಕಣ್ಣೀರಿಡುತ್ತಾ ಮನವಿ ಮಾಡಿದ್ದಾರೆ. ಈ ಸಂಬಂಧ ಅವರು ಹಿರಿಯ ಪೊಲೀಸ್ ಅಧಿಕಾರಿಗಳಿಗೆ ಲಿಖಿತ ದೂರು ನೀಡಿದ್ದು, ಸೂಕ್ತ ತನಿಖೆ ನಡೆಸುವಂತೆ ಆಗ್ರಹಿಸಿದ್ದಾರೆ.

ಹೀಲಿಯಂ ಸಿಲಿಂಡರ್ ಬ್ಲಾಸ್ಟ್ ಪ್ರವಾಸಿ ತಾಣಗಳಲ್ಲಿ ಹೈ ಅಲರ್ಟ್

ಮೈಸೂರು: ನಗರದ ಅರಮನೆ ಮುಂಭಾಗ ಹೀಲಿಯಂ ಸಿಲಿಂಡರ್ ಸ್ಫೋಟ ಪ್ರಕರಣಕ್ಕೆ ಸಂಬಂಧಿಸಿದಂತೆ ಮೈಸೂರಿನ ಪ್ರವಾಸಿ ತಾಣಗಳಲ್ಲಿ ಮತ್ತಷ್ಟು ಕಟ್ಟೆಚ್ಚರ ವಹಿಸಲಾಗಿದೆ. ಅರಮನೆ ಒಳಗೆ ಶ್ವಾನದಳ, ಸ್ಫೋಟಕ ಪತ್ತೆ ದಳದಿಂದ ತಪಾಸಣೆ ನಡೆಸಲಾಗಿದೆ. ಪ್ರತಿನಿತ್ಯ ಅರಮನೆಯಲ್ಲಿ ತಪಾಸಣೆ ನಡೆಸಲಾಗುತ್ತಿದೆ. ಮೃಗಾಲಯ, ಚಾಮುಂಡಿ ಬೆಟ್ಟ, ಸಂತಫಿಲೋಮಿನಾ ಚರ್ಚ್ ಸೇರಿ ಹಲವೆಡೆ ತಪಾಸಣೆ ನಡೆಸಲಾಗುತ್ತಿದೆ. ಅನುಮಾನಸ್ಪದ ವ್ಯಕ್ತಿಗಳನ್ನು ವಿಚಾರಣೆ ನಡೆಸಲಾಗುತ್ತಿದೆ ಹೆಚ್ಚಿನ ಸಂಖ್ಯೆಯಲ್ಲಿ ಪ್ರವಾಸಿಗರು ಆಗಮಿಸುತ್ತಿದ್ದಾರೆ. ಪ್ರವಾಸಿಗರು ಆಗಮಿಸುತ್ತಿದ್ದಾರೆ. ಈ ನಿಟ್ಟಿನಲ್ಲಿ ಪ್ರವಾಸಿಗರ ಮೇಲೆ ಮೈಸೂರು ಪೊಲೀಸರು ಹದ್ದಿನ ಕಣ್ಣಿಟ್ಟಿದ್ದಾರೆ. ಯಾವುದೇ ಅಹಿತಕರ ಘಟನೆ ಸಂಭವಿಸದಂತೆ

ಕಟ್ಟೆಚ್ಚರವಹಿಸಲಾಗಿದೆ. ಅರಮನೆಯ ಮುಂಭಾಗ ಹೀಲಿಯಂ ಗ್ಯಾಸ್ ಬ್ಲಾಸ್ಟ್‌ ಆದ ಪರಿಣಾಮ ಓರ್ವ ಸಾವನ್ನಪ್ಪಿದ್ದು, ಮೂವರು ಗಂಭೀರ ಗಾಯಗೊಂಡಿದ್ದರು. ಗಾಯಾಳುಗಳಲ್ಲಿ ಚಿಕಿತ್ಸೆ ಫಲಿಸದೇ ಇಬ್ಬರು ಸಾವನ್ನಪ್ಪಿದ್ದು, ಸಾವಿನ ಸಂಖ್ಯೆ ಮೂರಕ್ಕೆ ಏರಿಕೆಯಾಗಿದೆ. ಈ ಸ್ಫೋಟ ಪ್ರಕರಣವನ್ನು ಎನ್‌ಐಎ ತನಿಖೆ ನಡೆಸುತ್ತಿದೆ.

ಕನ್ನಡ ಭಾಷೆ ಬಗ್ಗೆ ಮೋದಿ ಮಾತು; ದುಬೈನಲ್ಲಿ ಕನ್ನಡಾಭಿಮಾನಕ್ಕೆ ಪ್ರಧಾನಿ ಶ್ಲಾಘನೆ

ನವದೆಹಲಿ: ಮನ್ ಕಿ ಬಾತ್‌ನಲ್ಲಿ ಕನ್ನಡ ಭಾಷೆ ಬಗ್ಗೆ ಪ್ರಧಾನಿ ಮೋದಿ ಮಾತನಾಡಿದ್ದಾರೆ. ದುಬೈ ಕನ್ನಡಿಗರ ಕನ್ನಡ ಭಾಷಾ ಪ್ರೇಮದ ಬಗ್ಗೆ ಶ್ಲಾಘನೆ ವ್ಯಕ್ತಪಡಿಸಿದ್ದಾರೆ. ತಮ್ಮ 129 ನೇ ರೇಡಿಯೋ ಕಾರ್ಯಕ್ರ